ಅಧ್ಯಕ್ಷರು: ಶಾಸಕರ ಅನುದಾನದಲ್ಲಿ ಕೊಡುವುದಕ್ಕೆ ಅವಕಾಶ ಮಾಡಿಕೊಡಿ.

ಶ್ರೀ ಅರವಿಂದ ಲಿಂಬಾವಳಿ: ಮಾನ್ಯ ಅಧ್ಯಕ್ಷರೆ, ಶಾಸಕರ ಅನುದಾನದಲ್ಲಿ ಶಾಲೆಗಳಲ್ಲಿ ಸಿಸಿ ಟಿವಿ ಅಳವಡಿಸುವುದಕ್ಕೆ ಅವಕಾಶ ಕೊಡುತ್ತೀರಾ?

ಶ್ರೀ ಕಿಮ್ಮನೆ ರತ್ನಾಕರ್: ಮಾನ್ಯ ಅಧ್ಯಕ್ಷರೆ, ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಿರುವಂಥ ಹಣ ಮಂಜೂರಾತಿ ಏನಿದೆ, ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಿಂದ ಕೊಡುವುದಕ್ಕೆ ಖಂಡಿತವಾಗಿ ತಿದ್ದುಪಡಿ ಮಾಡುವುದಕ್ಕೆ ನಾನು ನಿವೇದನೆಯನ್ನು ಕಳುಹಿಸುತ್ತೇನೆ, ನಾನು ಪ್ರಯತ್ನ ಮಾಡುತ್ತೇನೆ. ಇದರಿಂದ ನಮಗೆ ಅನುಕೂಲವಾಗುತ್ತದೆ.

ಅಧ್ಯಕ್ಷರು: ರಾಜೇಶ್ ಹೆಚ್.ಪಿ.

ಶ್ರೀ ರಾಜೇಶ್ ಹೆಚ್.ಪಿ.(ಜಗಳೂರು): ಮಾನ್ಯ ಸಭಾಧ್ಯಕ್ಷರೆ, ಪ್ರಶ್ನೆ ಸಂಖ್ಯೆ:312ನ್ನು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರನ್ನು ಕೇಳಬಯಸುತ್ತೇನೆ.

ಶ್ರೀ ಟಿ.ಬಿ.ಜಯಚಂದ್ರ(ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ಉತ್ತರಗಳನ್ನು ಒದಗಿಸಲಾಗಿದೆ.

ಕುಡಿಯುವ ನೀರಿನ ಸಮಸ್ಯೆಗಳು

26(312), ಶ್ರೀ ರಾಜೇಶ್ ಹೆಚ್.ಪಿ. (ಜಗಳೂರು)

ಅ) ಜಗಳೂರು ವಿಧಾನಸಭಾ ಕ್ಷೇತ್ರದ ರಾಜೀವ್‌ಗಾಂಧಿ ಸಬ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ವ್ಯವಸ್ಥೆಯ ಕಾರ್ಯಕ್ರಮ ಯಾವ ಹಂತದಲ್ಲಿರುತ್ತೆ; ಕುಡಿಯುವ ನೀರಲ್ಲಿ ಫ್ಲೋರೈಡ್ ಅಂಶ ಹೆಚ್ಚಾಗಿದ್ದು, ಇದರ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ.

ಆ) ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಇದರ ಬಗ್ಗೆ ಸರ್ಕಾರದ ವತಿಯಿಂದ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಟಿ.ಬಿ.ಜಯಚಂದ್ರ (ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಪರವಾಗಿ)

ಅ) ಜಗಳೂರು ವಿಧಾನಸಭಾ ಕ್ಷೇತ್ರ ನಂದಿಗಾವಿ ಮತ್ತು ಇತರೆ 156 ಗ್ರಾಮಗಳಿಗೆ ತುಂಗಭದ್ರಾ ಜಲಮೂಲ ಆಧರಿಸಿ ಶಾಶ್ವತ ಹಾಗೂ ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಈ ಹಿಂದೆ ತಯಾರಿಸಿದ್ದ ಯೋಜನೆಯ ಅಂದಾಜನ್ನು ₹ 186 ಕೋಟಿಗಳಿಗೆ ಪರಿಷ್ಕರಿಸಲಾಗಿದೆ. ಈ ಯೋಜನೆಯ ಅನುಷ್ಠಾನ ತೀವ್ರಗೊಳಿಸಲು 4ನೇ ಬಾರಿಗೆ DBOT ಆಧಾರದ ಮೇಲೆ ಟೆಂಡರ್ ಕರೆದಿದ್ದು, ದಿ:16.12.2014ರಂದು ಟೆಂಡರ್ ಸಲ್ಲಿಸಲು ಅಂತಿಮ ದಿನಾಂಕವಾಗಿದೆ. ತೀವ್ರ ಫ್ಲೋರೈಡ್ ಬಾಧಿತ ಜನವಸತಿಗಳಲ್ಲಿ ನೀರು ಶುದ್ಧೀಕರಣ ಘಟಕಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.

ಆ) ದಾವಣಗೆರೆ ಜಿಲ್ಲೆಗೆ ಅನುಮೋದಿಸಿರುವ ಸಾಮಾನ್ಯ NRDWP ಕ್ರಿಯಾ ಯೋಜನೆಯಡಿ ಜಗಳೂರು ತಾಲ್ಲೂಕಿಗೆ ₹ 651.54 ಲಕ್ಷ ಅಂದಾಜು ಮೊತ್ತದ 295 ಹೊಸ ಕುಡಿಯುವ ನೀರಿನ ಯೋಜನೆಗಳನ್ನು ಮಂಜೂರು ಮಾಡಿದೆ. ಇದಲ್ಲದೆ, ಜಗಳೂರು ತಾಲ್ಲೂಕಿನಲ್ಲಿ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ತುರ್ತು ಕುಡಿಯುವ ನೀರಿನ ಯೋಜನೆಗಳಿಗೆ (Contingent Action Plan) ₹ 507.00 ಲಕ್ಷಗಳ 95 ಕಾಮಗಾರಿಗಳ ಪ್ರಸ್ತಾವನೆಯನ್ನು ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರು ಕಾರ್ಯಕ್ರಮ (NRDWP) ದಡಿ ಸಿದ್ಧಪಡಿಸಿದ್ದು, ಅವುಗಳ ಅನುಷ್ಠಾನಕ್ಕೆ ಜಿಲ್ಲಾ ಪಂಚಾಯತ್ ಕ್ರಮವಹಿಸಿದೆ.

ಶ್ರೀ ರಾಜೇಶ್ ಹೆಚ್.ಪಿ.: ಮಾನ್ಯ ಸಭಾಧ್ಯಕ್ಷರೆ, ಉತ್ತರವನ್ನು ಒದಗಿಸಿದ್ದಾರೆ. ಆದರೂ ಸಹ ರಾಜೀವ್‌ಗಾಂಧಿ ಸಬ್‌ಮಿಷನ್ ಯೋಜನೆ ನಮ್ಮ ತಾಲ್ಲೂಕಿಗೆ ಬಹು ದಿನಗಳ ಕನಸಿನ ಯೋಜನೆ. ಇದು ಸುಮಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವಂಥ ಯೋಜನೆಯಾಗಿದೆ. ನಮ್ಮ ತಾಲ್ಲೂಕಿನಲ್ಲಿ ಬಹಳಷ್ಟು ಗ್ರಾಮಗಳು ಫ್ಲೋರೈಡ್ ಮತ್ತು ನೈಟ್ರೇಟ್ ಇರುವಂಥ ಗ್ರಾಮಗಳಾಗಿರುವುದರಿಂದ, ಈ ಗ್ರಾಮಗಳ ಕುಡಿಯುವ ನೀರಿನ ಯೋಜನೆಯನ್ನು ಅತ್ಯಂತ ತ್ವರಿತಗತಿಯಲ್ಲಿ ನಮ್ಮ ಕ್ಷೇತ್ರದ ಗ್ರಾಮಗಳಿಗೆ ಕೊಡುವ ಸಂದರ್ಭದಲ್ಲಿ ನಾವು NRDWP ಯೋಜನೆಯಡಿಯಲ್ಲಿ ವರ್ಷಕ್ಕೆ ಸುಮಾರು 5 ರಿಂದ 10 ಕೋಟಿ ರೂಪಾಯಿಗಳನ್ನು ಕುಡಿಯುವ ನೀರಿನ ಯೋಜನೆಗೆ ತಾತ್ಕಾಲಿಕವಾಗಿ ವೆಚ್ಚ ಮಾಡುತ್ತಿದ್ದೇವೆ. ಆ ಹಿನ್ನೆಲೆಯಲ್ಲಿ ಶಾಶ್ವತವಾಗಿ ಕುಡಿಯುವ ನೀರಿನ ಯೋಜನೆಯನ್ನು ಮಾಡುವುದರ ಮುಖಾಂತರ ನಮ್ಮ ಕ್ಷೇತ್ರಕ್ಕೆ ತ್ವರಿಗತಿಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿದ್ದೇ ಆದರೆ ನಮ್ಮ ಗ್ರಾಮಗಳಿಗೆ ಕುಡಿಯುವ ನೀರು ದೊರೆಯುತ್ತದೆ.

ಅಧ್ಯಕ್ಷರು: ನೀವು ಪ್ರಶ್ನೆಯನ್ನು ಕೇಳಿ.

ಶ್ರೀ ರಾಜೇಶ್ ಹೆಚ್.ಪಿ.: ಮಾನ್ಯ ಅಧ್ಯಕ್ಷರೆ, ಪ್ರಶ್ನೆ ಇದನ್ನೇ ಕೇಳುತ್ತಿದ್ದೇನೆ. ಉತ್ತರ ಬೇಕಾಗಿದೆ.

ಅಧ್ಯಕ್ಷರು: ಉತ್ತರ ಕೊಟ್ಟಿದ್ದಾರಲ್ಲಾ.

ಶ್ರೀ ರಾಜೇಶ್ ಹೆಚ್.ಪಿ.: ಮಾನ್ಯ ಅಧ್ಯಕ್ಷರೆ, ಆದಷ್ಟು ಬೇಗ ತ್ವರಿಗತಿಯಲ್ಲಿ ಈ ಯೋಜನೆಯನ್ನು ಕೈಗೊಳ್ಳಿ ಎಂದು ಸಚಿವರಲ್ಲಿ ಮನವಿ ಮಾಡಿಕೊಳ್ಳುತ್ತಿದ್ದೇನೆ.

ಶ್ರೀ ಟಿ.ಬಿ.ಜಯಚಂದ್ರ: ಮಾನ್ಯ ಅಧ್ಯಕ್ಷರೆ, ಅವರು ಕೇಳಿದಂಥ ಎಲ್ಲಾ ಪ್ರಶ್ನೆಗಳಿಗೆ ಉತ್ತರಗಳನ್ನು ಕೊಟ್ಟಿದ್ದೇವೆ. ಈಗಾಗಲೇ ಟೆಂಡರ್ ಕರೆಯಲಾಗಿದ್ದು ದಿನಾಂಕ:16.12.2014ರಂದು ಅಂತಿಮ ದಿನವಾಗಿದೆ. ಟೆಂಡರ್‌ಗಳನ್ನು ಆದಷ್ಟು ಬೇಗ ಅಂತಿಮಗೊಳಿಸುವ ಕ್ರಮ ಕೈಗೊಂಡು

ಕುಡಿಯುವ ನೀರಿಗೆ ತೊಂದರೆಯಾಗಿರುವುದರಿಂದ ಸುರಕ್ಷಿತ ಕುಡಿಯುವ ನೀರನ್ನು ಕೊಡಲು ಕ್ರಮ ಕೈಗೊಳ್ಳುತ್ತೇವೆ.

ಶ್ರೀ ಕೆ.ಶಿವಮೂರ್ತಿ: ಟೆಂಡರ್ ಕರೆದು ಈಗಾಗಲೇ 3 ವರ್ಷಗಳಾಗಿದೆ.

ಶ್ರೀ ಟಿ.ಬಿ.ಜಯಚಂದ್ರ: ಈಗಾಗಲೇ ಹೊಸ ಕ್ರಿಯಾ ಯೋಜನೆ ಮಾಡಿ NRDWP ಯೋಜನೆಯಡಿ 6 ಕೋಟಿ 51 ಲಕ್ಷ ರೂಪಾಯಿಗಳ ಹಣವನ್ನು ಒದಗಿಸಲಾಗಿದೆ. ವಿಶೇಷವಾಗಿ contingency plan ಮಾಡಿ ಅದರಲ್ಲಿ 95 ಕಾಮಗಾರಿಗಳನ್ನು ತೆಗೆದುಕೊಳ್ಳಬೇಕೆನ್ನುವ ತೀರ್ಮಾನವನ್ನು ಮಾಡಲಾಗಿದೆ. ಕುಡಿಯುವ ನೀರಿನ ಸಮಸ್ಯೆಗೆ ಆದ್ಯತೆಯಿದೆ. ಜಿಲ್ಲಾ ಪಂಚಾಯಿತಿಗೆ ಸೂಚನೆಯನ್ನು ಕೊಟ್ಟು ಆದ್ಯತೆ ಮೇಲೆ contingency plan final ಮಾಡಿ ಆ ಪ್ರಕಾರ ಮಾಡುತ್ತೇವೆ.

ಶ್ರೀ ಕೆ.ಶಿವಮೂರ್ತಿ: ಮಾನ್ಯ ಅಧ್ಯಕ್ಷರೆ, ಕುಡಿಯುವ ನೀರಿಗೆ ಟೆಂಡರ್ 3 ವರ್ಷ ಮಾಡುತ್ತಾರೆಯೇ? ನನ್ನ ಕ್ಷೇತ್ರದ ಮುಖಾಂತರ ನೀರು ಹರಿಯುತ್ತದೆ. ಜಗಳೂರು ಮತ್ತು ಮಾಯಕೊಂಡ ಪಕ್ಕದ ಕಾಮಗಾರಿಗಳಿಗೆ ಟೆಂಡರ್‌ನ್ನು 3 ವರ್ಷದಿಂದ ಇಟ್ಟುಕೊಂಡಿದ್ದೀರಿ. Please relax the tender procedure.

ಶ್ರೀ ಟಿ.ಬಿ.ಜಯಚಂದ್ರ: ಮಾನ್ಯ ಅಧ್ಯಕ್ಷರೆ, ಟೆಂಡರ್ ಕರೆಯಲಾಗಿದೆ. ಈ ವಿಚಾರದಲ್ಲೀ ಹಣಕಾಸಿಗೆ ಕೊರತೆಯಿಲ್ಲ.

ಶ್ರೀ ಕೆ.ಶಿವಮೂರ್ತಿ: ಮಾನ್ಯ ಅಧ್ಯಕ್ಷರೆ, ಕುಡಿಯುವ ನೀರಿನ ಯೋಜನೆಯನ್ನು implement ಮಾಡುವುದಕ್ಕೆ 3 ವರ್ಷ ಬೇಕೇ?

ಶ್ರೀ ಟಿ.ಬಿ.ಜಯಚಂದ್ರ: ಟೆಂಡರ್ ಕರೆಯಲೇಬೇಕಲ್ಲ.

ಅಧ್ಯಕ್ಷರು: ಟೆಂಡರ್ ಕರೆದಿದ್ದಾರೆ, ಬೇಗ final ಮಾಡಿ

ಶ್ರೀ ಟಿ.ಬಿ.ಜಯಚಂದ್ರ: ಮಾನ್ಯ ಅಧ್ಯಕ್ಷರೆ, ಏನಾಯಿತೆಂದರೆ escalation ಆಗಿ 156 ರಿಂದ 186 ಕೋಟಿ ರೂಪಾಯಿಗಳಿಗೆ ಆಗಿದೆ.

ಅಧ್ಯಕ್ಷರು: ಶ್ರೀ ರೇವಣ್ಣ ಹೆಚ್.ಡಿ.

ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ): ಮಾನ್ಯ ಅಧ್ಯಕ್ಷರೆ, ಪ್ರಶ್ನೆ ಸಂಖ್ಯೆ: 681ನ್ನು ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರಿಗೆ ಕೇಳಬಯಸುತ್ತೇನೆ.

ಶ್ರೀ ಕಿಮ್ಮನೆ ರತ್ನಾಕರ್(ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಣ ರಾಜ್ಯ ಸಚಿವರು): ಮಾನ್ಯ ಅಧ್ಯಕ್ಷರೆ, ಉತ್ತರಗಳನ್ನು ಒದಗಿಸಲಾಗಿದೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳು

27(681), ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ)

ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ರಾಜ್ಯದಲ್ಲಿರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಬೋಧಕ/ಬೋಧಕೇತರ ಸಿಬ್ಬಂದಿಗಳ ಕೊರತೆಯಿಂದಾಗಿ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಣ ಸಚಿವರು)

ಅ) ಬಂದಿದೆ.

ಆ) ರಾಜ್ಯದಲ್ಲಿ ಒಟ್ಟು 1203 ಸರ್ಕಾರಿ ಪದವಿಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ಕಾಲೇಜುಗಳಿಗೆ ನಬಾರ್ಡ್ ಸಹಯೋಗದ ಆರ್‌ಐಡಿಎಫ್ ಯೋಜನೆಗಳಡಿ ಹಾಗೂ